**MVC**– 475/2022 **RW**: 01

**2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ.**

**ದಿಃ 14.08.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ** ಎದರುದಾರ **ಪರ ವಕೀಲರಿಂದಃ**

ನನ್ನ ಮುಖ್ಯವಿಚಾರಣೆಯ ಪ್ರಮಾಣಪತ್ರವನ್ನು ಈ ದಿನ ನ್ಯಾಯಾಲಯದ ಮುಂದೆ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ.

ಎದುರುದಾರ ಕಂಪನಿಯವರು ಪ್ರಸ್ತುತ ಪ್ರಕರಣದಲ್ಲಿ ನನಗೆ ನೀಡಿದ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಅರ್ 1 ಎಂದು, ವಿಮಾ ಪಾಲಿಸಿ ದೃಡಿಕೃತ ಪ್ರತಿಯನ್ನು ನಿಆರ್ 2 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಅರ್ಜಿದಾರರ ಪರ ಸಿ ಎಸ್ ಎಚ್ ವಕೀಲರಿಂದಃ**

ಅಪಘಾತ ಆದ ದಿನ ಅರ್ಜಿದಾರರಿಗೆ ಹಾಗೂ E Motor vehicle bearing chassis No. MCPR10250ALE19605 ENGINE NO.CHMTO12131038 ಸವಾರನಿಗೆ ಚಾಲನಾ ಪರವಾನಿಗೆ ಇರಲಿಲ್ಲ ಎಂದು ನೀವು ದಾಖಲೆ ಹಾಜರುಪಡಿಸಿರುತ್ತೀರಾ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ಎದುರುದಾರ ನಂ.1 ಇವರು ತಪ್ಪಿನಿಂದ ಅಪಘಾತ ಆಗಿದೆ ಎಂದು ಅವರ ವಿರುದ್ದ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೀರಾ ಎಂದರೆ ಸಾಕ್ಷಿ ಅರ್ಜಿದಾರ ಹಾಗೂ ಎದುರುದಾರ ನಂ.1 ಇಬ್ಬರ ಮೇಲೆ ಸಹ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತಾರೆಂದು ನುಡಿಯುತ್ತಾರೆ. ಸದರಿ ದೋಷಾರೋಪಣಾ ಪಟ್ಟಿ ಸಲ್ಲಿಸಿದ ಪ್ರಕರಣ ಏನಾಯಿತು ಎಂದು ಮಾಹಿತಿ ಇದೆಯಾ ಎಂದರೆ ಸಾಕ್ಷಿ ಅದರಲ್ಲಿನಾವು ಪಕ್ಷಗಾರರಲ್ಲ ಹಾಗಾಗಿ ಮಾಹಿತಿ ಇಲ್ಲ ಎಂದು ನುಡಿಯುತ್ತಾರೆ.

ಎದುರುದಾರ ನಂ.1 ಕಂಪನಿಯವರು ಅರ್ಜಿದಾರರಿಗೆ ಪರಿಹಾರವನ್ನು ನೀಡಲು ಹೊಣೆಗಾರಿಕೆ ಹೊಂದಿದ್ದರೂ ಅದನ್ನು ತಪ್ಪಿಸುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅರ್ಜಿದಾರರು ಅರ್ಜಿಯಲ್ಲಿ ಕೇಳಿದ ಪರಿಹಾರವನ್ನು ಕೊಡಲು ನಾವು ಬಾದ್ಯಸ್ಥರು ಎಂದರೆ ಸರಿಯಲ್ಲ.

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೆ ಸರಿ ಇದೆ.

**2 ನೇ ಅಧಿಕ ಹಿ.ದಿ.ನ್ಯಾ.ಹುಬ್ಬಳ್ಳಿ.**